# ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಗೆದ್ದರೆ ನನಗೆ ಶಕ್ತಿ ಬಂದಂತೆ : ಸಿಎಂ ಸಿದ್ದರಾಮಯ್ಯ

ಗೋಕಾಕ್ : ಲೋಕಸಭಾ ಚುನಾವಣೆಯಲ್ಲಿ ಸೋಲಿನ ಭೀತಿಯಿಂದಾಗಿ ಪ್ರಧಾನ ನರೇಂದ್ರ ಮೋದಿ ಅವರು ಸರಣಿ ಸುಳ್ಳುಗಳನ್ನು ಹೇಳುತ್ತಿದ್ದಾರೆ. ಕಳೆದ 10 ವರ್ಷಗಳಿಂದ ಕೊಟ್ಟ ಭರವಸೆಗಳನ್ನು ಈಡೇರಿಸದ ಮೋದಿ, ಇದೀಗ ಚುನಾವಣೆ ವೇಳೆ ಹೊಸ ಹೊಸ ಸುಳ್ಳುಗಳನ್ನು ಸೃಷ್ಟಿಸುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬಿಜೆಪಿ ನಾಯಕರ ವಿರುದ್ಧ ಆರೋಪಗಳ ಸುರಿಮಳೆಗೈದರು.

ಗೋಕಾಕ್ ನ ವಾಲ್ಮೀಕಿ ಮೈದಾನದಲ್ಲಿ ಮಂಗಳವಾರ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ್ ಪರ ಚುನಾವಣಾ ಪ್ರಚಾರಾರ್ಥ ನಡೆದ ಪ್ರಜಾಧ್ವನಿ–2 ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿದರು.

ಈ ಚುನಾವಣೆಯಲ್ಲಿ ನೀವು ಕೊಡುವ ತೀರ್ಪು, ದೇಶದ ಭವಿಷ್ಯವನ್ನು ಬದಲಿಸುವ ತೀರ್ಪು. ಕೇಂದ್ರ ಕೊಟ್ಟ ಭರವಸೆಗಳಲ್ಲಿ ಎಷ್ಟು ಈಡೇರಿವೆ? ದೇಶದ ಜನರಿಗೆ ಮೋದಿ ಸರಣಿ ಸುಳ್ಳು ಗಳನ್ನು ಹೇಳುತ್ತಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಆರೋಪಿಸಿದರು.

2013ರಲ್ಲಿ ನಾವು ಅಧಿಕಾರಕ್ಕೆ ಬಂದಾಗ ಜನಸಾಮಾನ್ಯರ ಬೇಡಿಕೆಗಳನ್ನು ಈಡೇರಿಸಲು ಪ್ರಯತ್ನ ಮಾಡಿದೆವು. ಪ್ರಧಾನ ಮನಮೋಹನ್ ಸಿಂಗ್ ಕಾಲದಲ್ಲಿ ಆಹಾರ ರಕ್ಷಣಾ ಕಾಯ್ದೆಯನ್ನು ಜಾರಿಗೊಳಿಸಲಾಯಿತು. ಆದರೆ, ಇದರ ಕ್ರೆಡಿಟ್ ಪಡೆಯಲು ಮೋದಿ ಪ್ರಯತ್ನಿಸುತ್ತಿದ್ದಾರೆ ಎಂದು ಹೇಳಿದರು.

ವಿದೇಶದಲ್ಲಿರುವ ಕಪ್ಪು ಹಣ ತಂದು, ಎಲ್ಲರ ಅಕೌಂಟ್ ಗೆ 15 ಲಕ್ಷ ರೂಪಾಯಿ ಹಾಕಲಾಗುವುದು ಎಂದರು. 10 ವರ್ಷ ಆದರೂ ಒಂದು ಪೈಸೆ ಬರಲಿಲ್ಲ. ವರ್ಷಕ್ಕೆ ಎರಡು ಕೋಟಿ ಉದ್ಯೋಗ ಕೊಡಲಿಲ್ಲ. ಕನಿಷ್ಟ 20 ಲಕ್ಷ ಉದ್ಯೋಗ ಕೊಡಲಿಲ್ಲ. ಬದಲಿಗೆ ನಿರುದ್ಯೋಗಿಗಳ ಸಂಖ್ಯೆ ಜಾಸ್ತಿ ಆಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿಸಿದರು.

ಹಿಂದಿನ ಚುನಾವಣೆಯಲ್ಲಿ ಆರ್ಟಿಕಲ್ 370, ಪುಲ್ವಾಮಾ ದಾಳಿ, ಸರಣಿ ಸುಳ್ಳುಗಳನ್ನು ಮುಂದಿಟ್ಟುಕೊಂಡು ಬಿಜೆಪಿಯವರು ಅಧಿಕಾರಕ್ಕೇರಿದ್ದರು. ಇದೀಗ ಮತ್ತೆ ಮೋದಿ ಹತಾಶೆಯಿಂದ ಸುಳ್ಳು ಹೇಳಲು ಶುರುಮಾಡಿದ್ದಾರೆ. ಮೋದಿ ನೇತೃತ್ವದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲು ಸಾಧ್ಯವಿಲ್ಲ ಎಂದು ಹೇಳಿದರು.

ಹಿಂದುಳಿದ ವರ್ಗಗಳ ಮೀಸಲಾತಿಯನ್ನು ಕಿತ್ತು ಮುಸ್ಲಿಮರಿಗೆ ಕೊಡುತ್ತಾರೆ ಎಂದು ಮೋದಿ ಸುಳ್ಳು ಹೇಳಲು ಶುರು ಮಾಡಿದ್ದಾರೆ. ಕರ್ನಾಟಕದ ಬಗ್ಗೆ ಅನೇಕ ಸುಳ್ಳುಗಳನ್ನು ಹೇಳುತ್ತಿದ್ದಾರೆ. ಅಧಿಕಾರಿಗಳಿಗೆ ಸಂಬಳ ಕೊಡಲು ಹಣ ಇಲ್ಲ. ಎಂದು ಸುಳ್ಳು ಹೇಳಲಾಗ್ತಿದೆ. ನಾವು ಅಧಿಕಾರಕ್ಕೆ ಬಂದಾಗ ಯಾರಿಗೂ ಸಂಬಳವೇ ಆಗಿರಲಿಲ್ಲ, ಎಲ್ಲರಿಗೂ ಸಂಬಳ ಮಾಡಿ, ನಂತರ ಕೂಡ ಅಭಿವೃದ್ಧಿ ಕಾರ್ಯಗಳನ್ನು ನಿಲ್ಲಿಸಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.



ಐದು ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದ್ದೇವೆ. ಗೃಹ ಜ್ಯೋತಿ, ಗೃಹಲಕ್ಷ್ಮಿ ಶಕ್ತಿ ಯೋಜನೆಗಳಿಂದ ಮಹಿಳೆಯರಿಗೆ ಸಬಲೀಕರಣಕ್ಕೆ ಅನುಕೂಲವಾಗಿದೆ. ಕರ್ನಾಟಕ, ತೆಲಂಗಾಣದಲ್ಲಿ ಗ್ಯಾರಂಟಿ ಯೋಜನೆಗಳು ಜಾರಿಗೆ ಬಂದ ಮೇಲೆ ಕಾಂಗ್ರೆಸ್ ಪಕ್ಷದ ಮೇಲೆ ಜನರಿಗೆ ನಂಬಿಕೆ ಬಂದಿದೆ. ಕೇಂದ್ರದಲ್ಲಿ ನಮ್ಮ ಸರ್ಕಾರ ಬಂದರೆ ಮಹಾಲಕ್ಷ್ಮಿ ಯೋಜನೆಯಡಿ ಒಂದು ಕುಟುಂಬಕ್ಕೆ ಒಂದು ಲಕ್ಷ ರೂಪಾಯಿ ನೀಡಲಾಗುವುದು ಎಂದರು.

*ಮೃಣಾಲ್ ಅಲ್ಲ, ನಾನೇ ಅಭ್ಯರ್ಥಿ*

ಕಾಂಗ್ರೆಸ್ ಅಭ್ಯರ್ಥಿಗಳಿಗೆ ಮತ ನೀಡಿದರೆ ನನಗೆ ಆಶೀರ್ವಾದ ಮಾಡಿದಂತೆ ಆಗುತ್ತೆ. ಈ ಕ್ಷೇತ್ರದ ಅಭ್ಯರ್ಥಿ ನಾನೇ, ಲಕ್ಷ್ಮೀ ಹೆಬ್ಬಾಳಕರ್ ಮಗ ಅಲ್ಲ. ಕಾಂಗ್ರೆಸ್ ಅಭ್ಯರ್ಥಿ ಗೆದ್ದರೆ ನನಗೆ ಶಕ್ತಿ ಬಂದಂತೆ ಆಗುತ್ತದೆ. ಎರಡೂ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳನ್ನು ಗೆಲ್ಲಿಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮನವಿ ಮಾಡಿದರು.

ಈ ವೇಳೆ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ, ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್, ಡಾ.ಎಂ.ಸಿ.ಸುಧಾಕರ್, ಮಾಜಿ ಉಪ ಮುಖ್ಯಮಂತ್ರಿ ಹಾಗೂ ಶಾಸಕರಾದ ಲಕ್ಷ್ಮಣ್ ಸವದಿ, ಭದ್ರಾವತಿ ಶಾಸಕರಾದ ಬಿ.ಕೆ.ಸಂಗಮೇಶ್, ಪುಟ್ಟ ರಂಗಶೆಟ್ಟಿ, ರಾಜು ಸೇಠ್, ನಯನಾ ಮೋಟಮ್ಮ, ಕೇರಳ ಶಾಸಕ ರೋಜಿ ಜಾನ್, ವಿಧಾನ ಪರಿಷತ್ ಸದಸ್ಯರಾದ ನಾಗರಾಜ್ ಯಾದವ್, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಪಲ್ಲವಿ.ಜಿ, ಭೋವಿ ನಿಗಮದ ಅಧ್ಯಕ್ಷರಾದ ಪ್ರವೀಣ್ ಕುಮಾರ್, ಬೆಳಗಾವಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ವಿನಯ್ ನಾವಲಗಟ್ಟಿ, ಮುಖಂಡರಾದ ಡಾ.ಮಹಾಂತೇಶ್ ಕಡಾಡಿ, ಮೋಹನ್ ಲಿಂಬಿಕಾಯಿ, ಅಶೋಕ್ ಪೂಜಾರಿ, ಸಿದ್ದಲಿಂಗ ದಳವಾಯಿ, ಅರವಿಂದ ದಳವಾಯಿ, ಚಂದ್ರಶೇಖರ್ ಕೊಣ್ಣೂರ, ಲಕ್ಕಣ್ಣ ಸವಸುದ್ದಿ, ಪ್ರೇಮಾ ಚಿಕ್ಕೋಡಿ, ಬಸವನಗೌಡ ಹೊಳಿಯಾಚೆ, ಪ್ರಕಾಶ್ ಢಾಗೆ, ಜಾರಿಕ್ ನದಾಫ್, ಗಂಗಾಧರ ಬಡಕುಂದ್ರಿ, ಭೀಮಪ್ಪ ಹಂದಿಗುಂದ್, ರಮೇಶ್ ಉಟಗಿ, ಸುರೇಶ್ ಅರಳಿ, ಲಗಮಣ್ಣ ಕಳಸನ್ನವರ್ ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

## ಮತ ಜಾಗೃತಿಗೆ "ಮಹಿಳಾ ಕ್ರಿಕೆಟ್ ಪಂದ್ಯಾವಳಿ"



ಬಳ್ಳಾರಿ,ಏ.–: ಮತದಾರರು ಕಡ್ಡಾಯವಾಗಿ ಮತದಾನ ಮಾಡುವಂತೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ಮತ್ತು ತಾಲ್ಲೂಕು ಆಡಳಿತ, ತಾಲ್ಲೂಕು ಸ್ವೀಪ್ ಸಮಿತಿ ವತಿಯಿಂದ ನಗರದ ಕೋಟೆ ಪ್ರದೇಶದ ಸಂತಜಾನರ ಕಾಲೇಜು ಮೈದಾನದಲ್ಲಿ ಮಂಗಳವಾರ ಮಹಿಳಾ ಕ್ರಿಕೆಟ್ ಪಂದ್ಯಾವಳಿ ಆಯೋಜಿಸಲಾಗಿತ್ತು. ಪಂದ್ಯಾವಳಿಗೆ ಚಾಲನೆ ನೀಡಿದ ತಾಲ್ಲೂಕು ಸ್ವೀಪ್ ನೋಡೆಲ್ ಅಧಿಕಾರಿ ಹಾಗೂ ತಾಪಂ ಇಒ ಮಡಗಿನ ಬಸಪ್ಪ ಅವರು ಚಾಲನೆ ನೀಡಿದರು.ಬಳಿಕ ಮಾತನಾಡಿದ ಅವರು, ಚುನಾವಣೆ ಪ್ರಜಾಪ್ರಭುತ್ವದ ಹಬ್ಬ ಇದ್ದಂತೆ. ಮತದಾರರು ಕಡ್ಡಾಯವಾಗಿ ಮತ ಚಲಾಯಿಸಿ ಪ್ರಜಾಪ್ರಭುತ್ವ ಸುಭದ್ರಗೊಳಿಸಬೇಕು. ಗ್ರಾಮೀಣ ಪ್ರದೇಶದಲ್ಲಿ ಕಡಿಮೆ ಪ್ರಮಾಣದ ಮತದಾನ ಆಗುತ್ತಿದ್ದು, ತಪ್ಪದೆ ಮತ ಚಲಾಯಿಸಬೇಕು. ಕ್ರಿಕೆಟ್ ಆಡುವ ಮೂಲಕ ವಿನೂತನವಾಗಿ ಮತ ಜಾಗೃತಿ ಮೂಡಿಸಲಾಗುತ್ತಿದೆ ಎಂದರು. ಪಂಚಾಯತ್ ರಾಜ್ ಸಹಾಯಕ ನಿರ್ದೇಶಕ ಮಹಮ್ಮದ್ ಗೌಸ್.ಆರ್ ಅವರು ಮಾತನಾಡಿ, ಎಲ್ಲಾ ಕ್ರೀಡಾಪಟುಗಳು ತಪ್ಪದೇ ಮತ ಚಲಾಯಿಸಬೇಕು ಹಾಗೂ ತಮ್ಮ ಸುತ್ತಮುತ್ತಲಿನ ಎಲ್ಲಾ ಮತದಾರರನ್ನು ಚುನಾವಣೆಯಲ್ಲಿ ಪಾಲ್ಗೊಂಡು ಮತ ಚಲಾಯಿಸುವಂತೆ ಪ್ರೇರೇಪಿಸಬೇಕೆಂದು ತಿಳಿಸಿದರು.ಈ ಸಂದರ್ಭದಲ್ಲಿ ತಾಪಂ ಸಹಾಯಕ ಲೆಕ್ಕಾಧಿಕಾರಿ ಶರಣಪ್ಪ, ತಾಪಂ ವ್ಯವಸ್ಥಾಪಕ ಬಚ್ಚಲಪ್ಪ.ವಿ.ಕೆ. ಸೇರಿದಂತೆ ಬಳ್ಳಾರಿ ಮತ್ತು ಕುರುಗೋಡು ಪೂರ್ವ, ಪಶ್ಚಿಮ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬಳ್ಳಾರಿ ತಾಲ್ಲೂಕು ದೈಹಿಕ ಶಿಕ್ಷಣಾಧಿಕಾರಿಗಳು ಹಾಗೂ ದೈಹಿಕ ಶಿಕ್ಷಕರು ಉಪಸ್ಥಿತರಿದ್ದರು. ಮಹಿಳಾ ಕ್ರಿಕೆಟ್ ಪಂದ್ಯಾವಳಿಯಲ್ಲಿ ವಿವಿಧ ಗ್ರಾಮ ಪಂಚಾಯತಿಯ ಮಹಿಳಾ ಆಟಗಾರರು, ಸ್ಥಳೀಯ ಮಹಿಳೆಯರು ಭಾಗವಹಿಸಿದ್ದರು.

## ಕಾಂಗ್ರೇಸ ಪಕ್ಷದವರು ಆರೋಪಗಳನ್ನು ಮಾಡುವುದರಲ್ಲಿ ನಿಸ್ಸೀಮರು : ಹಿರೇಮನಿ




ಬೆಳಗಾವಿ : ಚುನಾವಣಾ ಸಂದರ್ಭದಲ್ಲಿ ಈ ರೀತಿಯ ಖಾಸಗಿ ವಿಡಿಯೋ ಹರಿಬಿಡುವದು ಹಾಗೂ ಆರೋಪಗಳನ್ನು ಮಾಡುವದರಲ್ಲಿ ಕಾಂಗ್ರೆಸ್ ಪಕ್ಷದವರು ನಿಸ್ಸೀಮರು, ಹಿಂದೆ ಎಷ್ಟೋ ಸಲ ಇದೆ ರೀತಿಯ ವಾಮಮಾರ್ಗದ ಮೂಲಕ ಎಷ್ಟೋ ನಾಯಕರಿಗೆ ಮೋಸ ಮಾಡಿ, ಅಧಿಕಾರ ಪಡೆದ ದುರ್ಬುದ್ಧಿಯ ಕೆಲ ಜನರು ಕಾಂಗ್ರೆಸ್ಸಿನಲ್ಲಿ ಇದ್ದಾರೆ ಎಂದು ಜಗದೀಶ್ ಹಿರೇಮನ ಕಿಡಿ ಕಾರಿದ್ದಾರೆ.. ಮಂಗಳವಾರ ಬಿಜೆಪಿಯ ಚುನಾವಣಾ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯ ನಂತರ, ಪ್ರಜ್ವಲ ರೇವಣ್ಣ ಅವರ ವಿಚಾರವಾಗಿ ಮಾತನಾಡಿದ ರಾಜ್ಯ ಬಿಜೆಪಿಯ ನಿಕಟಪೂರ್ವ ಕಾರ್ಯದರ್ಶಿಯಾದ ಜಗದೀಶ್ ಹಿರೇಮನ ಅವರು, ಪ್ರಜ್ವಲ್ ರೇವಣ್ಣ ತಪ್ಪು ಮಾಡಿದ್ದರೆ ಅವರ ಮೇಲೆ ನಿರ್ದಾಕ್ಷಿಣ್ಯ ಕ್ರಮ ಆಗುವುದರಲ್ಲಿ ಸಂಶಯವಿಲ್ಲ, ಬಿಜೆಪಿ ವರಿಷ್ಠರು ಕೂಡಾ ಇದೆ ಮಾತು ಹೇಳಿದ್ದು, ಈ ವಿಷಯ ಮೊದಲೇ ಚರ್ಚೆಗೆ ಬಾರದೇ, ಚುನಾವಣೆಯಲ್ಲಿ ರಾಜಕೀಯ ಲಾಭದ ಉದ್ದೇಶ ಇಟ್ಟುಕೊಂಡು ಕಾಂಗ್ರೆಸ್ಸಿನವರು ಇಂತಹ ಕೆಲಸವನ್ನು ಹಿಂದಿನಂದಲೂ ಮಾಡುತ್ತಾ ಬಂದಿದ್ದಾರೆ, ಡಿ ಕೆ ಶಿವಕುಮಾರ್ ಅವರ ಬಳಿ ಸಿಡಿ ಬಾಕ್ಸೆ ಇದೆ ಎಂದಿದ್ದಾರೆ.

ಹಿಂದೆ ಪಕ್ಷಾತೀತವಾಗಿ ಎಷ್ಟೋ ಜನಪ್ರತಿನಿಧಿಗಳ ಖಾಸಗಿ ವಿಡಿಯೋಗಳು ಇರುವಾದದಾಗಿ, ಅವು ಹೊರಬರುತ್ತವೆ ಎಂಬ ಮಾತುಗಳು ಕೇಳಿಬಂದಾಗ, ಕೆಲವರು ಯಾಕೆ ಕೋರ್ಟ್ ಸ್ಟೇ ಹೋದರು?? ಆಗ ಅವರು ಪ್ರಾಮಾಣಿಕ ತನಿಖೆ ಆಗಲಿ ಎಂದು ಏಕೆ ಸುಮ್ಮನಿರಲಿಲ್ಲ?? ತಮಗೆ ಅನುಕೂಲ ಆಗಲು ಸ್ಟೇ ತರುವದು, ಬೇರೆಯವರ ವಿಷಯದಲ್ಲಿ ಮಾತ್ರ ತಕ್ಷಣ ತನಿಖೆ, ಕ್ರಮ ಆಗಬೇಕು ಎನ್ನುವ ದ್ವಂದ್ವ ನೀತಿ ಯಾಕೆ ಎಂದು ಪ್ರಶ್ನೆ ಮಾಡಿದರು.ಮಹಿಳೆಯರಿಗೆ ಗೌರವ ನೀಡುವಂತ, ಸನ್ಮಾನ ಮಾಡುವಂತ ಪಕ್ಷ ನಮ್ಮ ಬಿಜೆಪಿ ಪಕ್ಷ, ಒಂದು ವೇಳೆ ಮಹಿಳಾ ದೌರ್ಜನ್ಯ ಆಗಿದ್ದರೆ, ಪ್ರಜ್ವಲ್ ರೇವಣ್ಣ ಅವರು ತಪ್ಪಿತಸ್ಥರಾಗಿದ್ದರೆ ನ್ಯಾಯಯುತ ಕ್ರಮ ಆಗಲೇಬೇಕು, ಮೊದಲೇ ಈ ವಿಷಯ ಕಾಂಗ್ರೆಸ್ಸಿಗೆ ಗೊತ್ತಿತ್ತು ಎಂದರೆ ಆಗಲೇ ಈ ವಿಷಯವಾಗಿ ಕ್ರಮಕ್ಕೆ ಒತ್ತಾಯಿಸಬೇಕಿತ್ತು, ಈಗ ಚುನಾವಣಾ ಲಾಭಕ್ಕಾಗಿ ಮಾಡುವದಲ್ಲ ಎಂದರು.

## ಪ್ರಜ್ವಲ್ ರೇವಣ್ಣ ಕಾಮುಕನಿಗೆ ಬಿಜೆಪಿ ಟಿಕೆಟ್ ಕೊಟ್ಟಿದ್ದು ದುರಂತ: ಶ್ರೀನೇಟ್



ಬೆಳಗಾವಿ: ಹಾಸನದ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿಕೂಟದ ಅಭ್ಯರ್ಥಿ ಪ್ರಜ್ವಲ್ ರೇವಣ್ಣ ಸಾವಿರಾರು ಮಹಿಳೆಯರ ಮೇಲೆ ದೌರ್ಜನ್ಯ ಮಾಡಿರುವ ಪ್ರಕರಣ ಪ್ರಧಾನ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ತಿಳಿದಿದ್ದರೂ ಹಾಸನ ಟಿಕೆಟ್ ನೀಡಿದ್ದು ದುರ್ದೈವದ ಸಂಗತಿ ಎಂದು ಎಐಸಿಸಿ ರಾಷ್ಟ್ರೀಯ ಕಾಂಗ್ರೆಸ್ ವಕ್ತಾರೆ ಸುಪ್ರೀಯಾ ಶ್ರೀನೇಟ್ ವಾಗ್ದಾಳಿ ನಡೆಸಿದರು. ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ನರೇಂದ್ರ ಮೋದಿ ಅವರಿಗೆ ಪ್ರಜ್ವಲ್ ರೇವಣ್ಣ ಸಾವಿರಾರು ಮಹಿಳೆಯರ ಮೇಲೆ ದೌರ್ಜನ್ಯ ನಡೆಸಿರುವ ಮಾಹಿತಿ ಇತ್ತು. ಆದರೆ ಅವರಿಗೆ ಹಾಸನ ಟಿಕೆಟ್ ಕೊಟ್ಟು ಮೈಸೂರಿನಲ್ಲಿ ಬಿಜೆಪಿ ನಡೆಸಿದ ಸಮಾವೇಶದಲ್ಲಿ ಪ್ರಜ್ವಲ್ ರೇವಣ್ಣನ ಬೆನ್ನು ತಟ್ಟಿ ಮತ ನೀಡುವಂತೆ ಯಾವ ಮುಖ ಇಟ್ಟುಕೊಂಡು ಮತಯಾಚನೆ ಮಾಡಿದರು ಎಂದು ಪ್ರಶ್ನಿಸಿದರು.ಪ್ರಧಾನ ನರೇಂದ್ರ ಮೋದಿ ಹಾಗೂ ಮಹಿಳೆಯರ ಮೇಲೆ ದೌರ್ಜನ್ಯ ಮಾಡಿರುವವರ ಪರವಾಗಿ ನಿಲ್ಲುತ್ತಾರೆ. ಆದರೆ ಮಹಿಳಾ ಸಬಲೀಕರಣದ ಬಗ್ಗೆ ಮಾತನಾಡುತ್ತಾರೆ. ಪ್ರಜ್ವಲ್ ರೇವಣ್ಣನ ಪ್ರಕರಣದ ಕುರಿತು ಯಾವ ಕೇಂದ್ರ ಸಚಿವರು ಮಾತನಾಡದೆ ಇರುವುದು ವಿಪರ್ಯಾಸದ ಸಂಗತಿ ಎಂದರು.

## ಹೊಸ ಮೋಕಾದಲ್ಲಿ ಮತದಾನ ಜಾಗೃತಿ ಅಂಗವಾಗಿ ಕ್ರಿಕೆಟ್ ಓಟರ್ಸ್ ಕಪ್ ಪಂದ್ಯಾವಳಿ

### ಎಲ್ಲರೂ ತಪ್ಪದೇ ಮತದಾನ ಮಾಡಿ, ತಮ್ಮ ಸುತ್ತಮುತ್ತಲಿನ ನಾಗರಿಕರಿಗೂ ಮತದಾನ ಮಾಡಲು ತಿಳಿಸಿ: ಮಡಗಿನ ಚನ್ನಬಸಪ್ಪ



ಬಳ್ಳಾರಿ,ಏ–:ಮೇ 07 ರಂದು ಎಲ್ಲಾ ಕ್ರೀಡಾಪಟುಗಳು ತಪ್ಪದೇ ಮತದಾನ ಮಾಡಿ ಹಾಗೂ ತಮ್ಮ ಸುತ್ತಮುತ್ತಲಿನ ಅರ್ಹ ನಾಗರಿಕರಿಗೂ ಮತದಾನ ಮಾಡುವಂತೆ ತಿಳಿಸಿ ಎಂದು ತಾಲ್ಲೂಕು ಸ್ವೀಪ್ ನೋಡೆಲ್ ಅಧಿಕಾರಿ ಹಾಗೂ ತಾಪಂ ಇಒ ಮಡಗಿನ ಚನ್ನಬಸಪ್ಪ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಬಳ್ಳಾರಿ ತಾಲ್ಲೂಕು ಆಡಳಿತ, ತಾಲ್ಲೂಕು ಸ್ವೀಪ್ ಸಮಿತಿ ವತಿಯಿಂದ ಲೋಕಸಭಾ ಸಾರ್ವತ್ರಿಕ ಚುನಾವಣಾ–2024ರ ಮತದಾನ ಜಾಗೃತಿ ಮೂಡಿಸುವ ನಿಮಿತ್ತ ಹೊಸ ಮೋಕ ಗ್ರಾಮದ ಕರ್ನಾಟಕ ಪಬ್ಲಿಕ್ ಶಾಲೆ ಆವರಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಹೋಬಳಿ ಮಟ್ಟದ ಪುರುಷರ ಓಟರ್ಸ್ ಕಪ್ ಪಂದ್ಯಾವಳಿಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಕ್ರೀಡಾಪಟುಗಳು ಆಟದಲ್ಲಿ ಉತ್ಸುಕರಾದಂತೆ ಮತ ಚಲಾವಣೆಯಲ್ಲಿ ಕೂಡ ಉತ್ಸುಕತೆಯಿಂದ ಮತದಾನ ಮಾಡಬೇಕು ಎಂದರು.

ಈ ಸಂದರ್ಭದಲ್ಲಿ ಪಂಚಾಯತ್ ರಾಜ್ ಇಲಾಖೆಯ ಸಹಾಯಕ ನಿರ್ದೇಶಕ ಮಹಮ್ಮದ್ ಗೌಸ್ ಸೇರಿದಂತೆ ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

## ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿದರೆ, ನೀವು ಅಶ್ಲೀಲ ಆಗುತ್ತೀರೀ: ಯತ್ನಾಳ್



ಬೆಳಗಾವಿ: ಸಂಕೇಶ್ವರ ಪಟ್ಟಣದಲ್ಲಿ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಅಣ್ಣಾಸಾಬ್ ಜೊಲ್ಲೆ ಅವರ ಪರವಾಗಿ ಪ್ರಚಾರಾರ್ಥವಾಗಿ ಮಾತನಾಡಿ, ಸಾಹುಕಾರನ ಹಣ ತೆಗೆದುಕೊಂಡು ಕಾಂಗ್ರೆಸ್ ಮತ ನೀಡಿದರೆ, ದೇಶವೇ ಉಳಿಯುವುದಿಲ್ಲ, ನಮ್ಮ ರಕ್ಷಣೆ ಮಾಡುವುದಿಲ್ಲ,ಹಿಂದೆ ಸತೀಶ್ ಜಾರಕಿಹೊಳಿ ಸ್ಮಶಾನದಲ್ಲಿ ಪೂಜೆ ಸಲ್ಲಿಸುತ್ತಿದ್ದರು,ಸದ್ಯಕ್ಕೆ ಸತೀಶ್ ಜಾರಕಿಹೊಳಿ ಯಾಕೆ ಸ್ಮಶಾನಕ್ಕೆ ಹೊಗುತಿಲ್ಲ, ಚುಣಾವಣೆ ಬಂದ ತಕ್ಷಣವೇ ಹಿಂದೂ ದೇವಾಲಯಗಳು, ಮಠಗಳು ಸಚಿವ ಜಾರಕಿಹೊಳಿ ಅವರಿಗೆ ನೆನಪಾಗಿದೆ ಎಂದು ಜಾರಕಿಹೊಳಿ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

## ಮತ್ತೊಮ್ಮೆ ಮೋದಿಯವರನ್ನು ಪ್ರಧಾನಿಯನ್ನಾಗಿ ಮಾಡಿ



ಯಮಕನಮರಡಿ : ದೇಶದ ಸರ್ವಾಂಗೀಣ ಅಭಿವೃದ್ದಿಗಾಗಿ ನರೇಂದ್ರ ಮೋದಿಯರ ಕೈ ಬಲಪಡಿಸಲು ಚಿಕ್ಕೋಡಿ ಲೋಕಸಭಾ ಬಿಜೆಪಿ ಅಭ್ಯರ್ಥಿ ಅಣ್ಣಾಸಾಹೇಬ ಜೊಲ್ಲೆಯವರನ್ನು ಗೆಲ್ಲಿಸಬೇಕೆಂದು ಬಿಜೆಪಿ ಹುಕ್ಕೇರಿ ಮಂಡಳ ಅಧ್ಯಕ್ಷ ರಾಚಯ್ಯ ಹಿರೇಮಠ ಹೇಳಿದರು. ಅವರು ಸೋಮವಾರ ದಿ. 29 ರಂದು ಹುಕ್ಕೇರಿ ಮತಕ್ಷೇತ್ರದ ವ್ಯಾಪ್ತಿಗೆ ಬರುವ ಘೋಡಗೇರಿ ಗ್ರಾಮದಲ್ಲಿ ಚಿಕ್ಕೋಡಿ ಲೋಕಸಭಾ ಬಿಜೆಪಿ ಅಭ್ಯರ್ಥಿ ಅಣ್ಣಾಸಾಹೇಬ ಜೊಲ್ಲೆಯವರ ಪರ ಮತಯಾಚಿಸಿ ದೇಶದ ಸುರಕ್ಷತೆ ಸಮಗ್ರ ಅಭಿವೃದ್ದಿಗಾಗಿ ನರೇಂದ್ರ ಮೋದಿಯವರನ್ನು ಮತ್ತೊಮ್ಮೆ ಪ್ರಧಾನ ಮಾಡಲು ಯುವಕರು ಸಂಘಟಿಕರಾಗಿ ಈ ಚುನಾವಣೆಯಲ್ಲಿ ಶ್ರಮಿಸಬೇಕೆಂದರು.

ಈ ವೇಳೆಯಲ್ಲಿ ಎ.ವಾಯ್ ಪಾಟೀಲ, ಗುರುನಾಥ ಕಡೇಲಿ, ಶ್ರೀಕಾಂತ ಪೂಜೇರಿ, ಚನ್ನಪ್ಪಾ ಸೊಂಟನ್ನವರ, ಮಲ್ಲಪ್ಪಾ ಆಗನೂರಿ, ಸುರೇಶ ರಾಜನ್ನವರ, ಮಲ್ಲಪ್ಪಾ ಮುಗಳಿ, ಶಿವಲಿಂಗ ದಾದಬಾನಟ್ಟಿ, ಸುರೇಶ ಸನ, ಈರಯ್ಯ ಹಿರೇಮಠ, ಮತ್ತು ಯುವಕರಾದ ಪ್ರವೀಣ, ಮಹೇಶ, ದೀಪಕ, ಚಂದ್ರಕಾಂತ, ಮೃತ್ಯುಂಜಯ, ರಮೇಶ, ಮಂಜುನಾಥ, ಅಜೀತ, ಅಮೀತ, ಹಾಗೂ ಸಮಸ್ತ ಬಿಜೆಪಿ ಕಾರ್ಯಕರ್ತರು ಯುವಕರು ಉಪಸ್ಥಿತರಿದ್ದರು. ಮಹೇಶ, ದೀಪಕ, ಚಂದ್ರಕಾಂತ, ಮೃತ್ಯುಂಜಯ, ರಮೇಶ, ಮಂಜುನಾಥ, ಅಜೀತ, ಅಮೀತ, ಹಾಗೂ ಸಮಸ್ತ ಬಿಜೆಪಿ ಕಾರ್ಯಕರ್ತರು ಯುವಕರು ಉಪಸ್ಥಿತರಿದ್ದರು.

## ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ–2 ಕೇಂದ್ರಗಳಿಗೆ ಸಿಇಓ ಭೇಟಿ ವೆಬ್ ಕಾಸ್ಟಿಂಗ್ ವ್ಯವಸ್ಥೆ ಪರಿಶೀಲನೆ

ವಿಜಯಪುರ ಏ.:– ನಗರದ ಬಾಲಕರ ಪದವಿ ಪೂರ್ವ ಕಾಲೇಜಿಗೆ ಭೇಟಿ ನೀಡಿ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ–2 ಕೇಂದ್ರಗಳಿಗೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ ಸೋಮವಾರ ಭೇಟಿ ನೀಡಿ ವೆಬ್ ಕಾಸ್ಟಿಂಗ್ ವ್ಯವಸ್ಥೆಯನ್ನು ಪರಿಶೀಲಿಸಿದರು.ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ–2 ಗೆ ಹಾಜರಾದ ಎಲ್ಲ ವಿದ್ಯಾರ್ಥಿಗಳ ಹಾಜರಾತಿ, ಪರೀಕ್ಷಾ ಕೇಂದ್ರಗಳ ಕೊಠಡಿಗಳ ಸಂಖ್ಯೆ, ವಿದ್ಯಾರ್ಥಿಗಳಿಗೆ ಆಸನದ ವ್ಯವಸ್ಥೆ, ವಿಶೇಷ ಅಗತ್ಯವುಳ್ಳ ವಿದ್ಯಾರ್ಥಿಗಳಿಗೆ ಪ್ರತ್ಯೇಕ ಆಸನದ ವ್ಯವಸ್ಥೆ,ಪರೀಕ್ಷಾ ಕೊಠಡಿ ಮೇಲ್ವಿಚಾರಕರ ನೇಮಕ ಮಾಡಿರುವುದು,ಪರೀಕ್ಷಾ ಕೇಂದ್ರದಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಿರುವ ಕುರಿತು, ಪರೀಕ್ಷಾ ಕೇಂದ್ರದಲ್ಲಿ ಎಲ್ಲಾ ಕೊಠಡಿಗಳಿಗೆ ಸಿಸಿ ಟಿವಿ ಮತ್ತು ವೆಬ್ ಕಾಸ್ಟಿಂಗ್ ಅಳವಡಿಸಿರುವ ಕುರಿತು ಪರಿಶೀಲಿಸಿದರು. ಬಳಿಕ ಜಿಲ್ಲಾ ಪಂಚಾಯ ತಿಯ ಆವರಣದಲ್ಲಿರುವ ಜಿಲ್ಲಾ ಸಂಪನ್ಮೂಲ ಕೇಂದ್ರದಲ್ಲಿ ಅಳವಡಿಸಿ ರುವ ವೆಬ್ ಕಾಸ್ಟಿಂಗ್ ವ್ಯವಸ್ಥೆಯನ್ನು ವೀಕ್ಷಿಸಿದರು.ಪರೀಕ್ಷಾ ಕೇಂದ್ರಗಳಲ್ಲಿ ಪ್ರಶ್ನೆ ಪತ್ರಿಕೆ ಅಭಿರಕ್ಷಕರು ಹಾಗೂ ಸ್ಥಾನಿಕ ಜಾಗೃತ ದಳದವರು ನಿಯಮಾನುಸಾರ ಕರ್ತವ್ಯ ನಿರ್ವಹಿಸುತ್ತಿರುವ ಕುರಿತು ಪರೀಕ್ಷಾ ಕೇಂದ್ರಗಳಲ್ಲಿ ಅನ್ಯ ಹಾಗೂ ಬಾಹ್ಯ ವ್ಯಕ್ತಿಗಳು ಯಾರೂ ಇಲ್ಲದೇ ಇರುವುದನ್ನೂ ಸಹ ಪರಿಶೀಲಿಸಿದರು. ಇದೇ ವೇಳೆ ಪರೀಕ್ಷಾ ಕೇಂದ್ರಗಳಲ್ಲಿ ಯಾವುದೇ ಸಮಸ್ಯೆಗಳು ಉಂಟಾಗದಂತೆ ಪರೀಕ್ಷೆಗಳನ್ನು ಕಟ್ಟು–ನಿಟ್ಟಾಗಿ ಶಿಸ್ತಿನಿಂದ ಮತ್ತು ಪರೀಕ್ಷೆಯನ್ನು ಅಚ್ಚುಕಟ್ಟಾಗಿ ನಡೆಸುವುದು, ಭದ್ರತೆ ಒದಗಿಸುವುದು, ವಿದ್ಯಾರ್ಥಿಗಳು ಭಯಮುಕ್ತ ಪ್ರಶಾಂತ ವಾತಾವರಣದಲ್ಲಿ ಆತ್ಮ ವಿಶ್ವಾಸದಿಂದ ಪರೀಕ್ಷೆ ಬರೆಯುವ ವಿದ್ಯಾರ್ಥಿ ಸ್ನೇಹಿ ಪರೀಕ್ಷಾ ವ್ಯವಸ್ಥೆಯನ್ನು ನಿರ್ಮಿಸಲು ಅಗತ್ಯ ಕ್ರಮ ವಹಿಸಬೇಕು ಎಂದು ಸ್ಥಳದಲ್ಲಿದ್ದ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ ಸೂಚನೆ ನೀಡಿದರು.ಈ ಸಂದರ್ಭದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸಿ.ಕೆ ಹೊಸಮನಿ,ಬಾಲಕರ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಬಿ.ಬಿ. ಗಂಗನಹಳ್ಳಿ ಹಾಗೂ ಸ್ಥಾನಿಕ ಜಾಗೃತ ದಳದವರಾದ ತಿಕೋಟೆ ಮತ್ತು ಮದರಿ, ಪ್ರಶ್ನೆ ಪತ್ರಿಕೆ ಪಾಲಕರಾದ ಟಕ್ಕಳಕಿ, ಉಮರ್ಜಿ, ನಾರಾಯಣಪುರ, ಕುಂಬಾರ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಹೊಸಪೇಟೆ ರಸ್ತೆಯ ವಿನಾಯಕ ನಗರದಲ್ಲಿ ರಸ್ತೆ ಅಪಘಾತ ಬೈಕ್ ಸಾವರ ಸಾವು




ಬಳ್ಳಾರಿ ಏ –ಬಳ್ಳಾರಿ ನಗರದ 33ನೇ ವಾರ್ಡ್ ವಿನಾಯಕ ನಗರದಲ್ಲಿ ಭೀಕರ ರಸ್ತೆ ಅಪಘಾತ ನಡೆದಿದೆ. ಈ ರಸ್ತೆ ಅಪಘಾತದಲ್ಲಿ ಬೈಕ್ ಸವಾರ ಹೊನ್ನಪ್ಪ (50)ಕಂಪ್ಲಿ ಮುದ್ದಾಪುರ ಗ್ರಾಮ ವಾಸಿ ಎಂದು ತಿಳಿದುಬಂ ದಿದೆ. ಅಧಿಕ ಟನ್ನೆಜ್ ಇರುವ ಲಾರಿ ಕೆಎ 40 7596 ಲಾರಿ ಬೈಕ್ ಸಾವರ ಮೇಲೆ ಹರಿದು ಘಟನಾ ಸ್ಥಳದಲ್ಲಿ ಸಾವನಪ್ಪಿದ್ದಾನೆ ಎಂದು ಟ್ರಾಫಿಕ್ ಪೊಲೀಸ್ ಠಾಣೆಯ ಸಿಬ್ಬಂದಿ ತಿಳಿಸಿದ್ದಾರೆ. ಬೈಕ್ ಸಾವರ ಹೊನ್ನಪ್ಪ ಕುಡುತ್ತಿನಿ ಯೂನಿಯನ್ ಬ್ಯಾಂಕ್ ನಲ್ಲಿ ರಿಕವರಿ ಕೆಲಸ ಮಾಡುತ್ತಿದ್ದನೆಂದು ಪೊಲೀಸರು ತಿಳಿಸಿದ್ದಾರೆ .ಈ ಘಟನೆ ನಡೆದು ಕೆಲವು ಗಂಟೆಗಳು ಅದರು ಸಿಬ್ಬಂದಿ ಯಾರು ಘಟನಸ್ಥಳಕ್ಕೆ ಬಾರದ ಕಾರಣ 2 ರಿಂದ 3 ಕಿಲೋಮೀಟರ್ ವರೆಗೆ ಸಾವಿರಾರು ವಾಹನಗಳು ಹೊಸಪೇಟೆಯ ಪ್ರಧಾನ ರಸ್ತೆಯಲ್ಲಿ ಸ್ಥಗಿತವಾಗಿದ್ದಾವೆ.

ಜಿಂದಾಲ್ ಕಾರ್ಖಾನೆ ಹಾಗೂ ಕುಡುತ್ತಿನಿ ಪವರ್ ಪ್ಲಾಂಟ್ ಮತ್ತು ಶಾಲಾ ಕಾಲೇಜುಗಳಿಗೆ ಹೋಗುವ ವಿದ್ಯಾರ್ಥಿಗಳು ಹಾಗೂ ಪ್ರಯಾಣ ಮಾಡುತ್ತಿರುವ ಪ್ರಯಾಣಿಕರು ವಾಹನಗಳಿಂದ ಕೆಳಗಡೆ ಇಳಿದು ಸಾವಿರಾರು ಸಂಖ್ಯೆಯಲ್ಲಿ ರಸ್ತೆಯಲ್ಲಿ ನಿಂತ ಘಟನೆ ಕಂಡು ಬಂತು.

ಆನಂತರ ಪೊಲೀಸರು ಘಟನಾ ಸ್ಥಳಕ್ಕೆ ಬಂದ ನಂತರ ಸ್ಥಳೀಯರು ಮತ್ತು ಪ್ರಯಾಣಿಕರು ಹಾಗೂ ವಿವಿಧ ಕಾರ್ಖಾನೆಗಳಿಗೆ ಹೋಗುವ ಸಿಬ್ಬಂದಿ ಪೊಲೀಸ್ ಅಧಿಕಾರಿಗಳಿಗೆ ತರಾಟೆಗೆ ತಗೊಂದರು. ಈ ರಸ್ತೆ ಮಾರ್ಗದಲ್ಲಿ ದಿನನಿತ್ಯ ಇಂಥ ಘೋರ ಘಟನೆಗಳು ನಡೆಯುತ್ತಿದ್ದಾವೆ.ರಸ್ತೆ ಅಗಲೀಕರಣ ಆಗಬೇಕು ಮತ್ತು ಟ್ರಾಫಿಕ್ ನಿಯಂತ್ರಣ ತಪ್ಪಿಸಬೇಕು ಎಂದು ಪ್ರಯಾಣಿಕರು, ಸ್ಥಳೀಯರು ಆಕ್ರೋಶ ವ್ಯಕ್ತವಾಗಿದ್ದಾರೆ.